# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 706 (766)**
**ಮಾನ್ಯ ಸದಸ್ಯರ ಹೆಸರು : ಶ್ರೀ ಹೆಚ್. ಪಿ. ಸುಧಾಮ್ ದಾಸ್ (ನಾಮನಿರ್ದೇಶನ ಹೊಂದಿದವರು)**
**ಉತ್ತರಿಸುವ ದಿನಾಂಕ : 23.07.2024**
**ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು**

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಸರ್ಕಾರಿ ಆದೇಶ ಸಂಖ್ಯೆ: ಸಿಪಿ 21 SPI 2013 ಬೆಂಗಳೂರು ದಿನಾಂಕ:02.01.2013ರ ಆದೇಶದಲ್ಲಿನ ಅಂಶಗಳ ಉಲ್ಲಂಘನ ಆಗಿದೆಯೇ; | ಸರ್ಕಾರದ ಆದೇಶ ಸಂಖ್ಯೆ:ಸಿಐ 21 ಎಸ್‌ಪಿಐ 2013 ಬೆಂಗಳೂರು, ದಿನಾಂಕ:02/01/2013ರಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ಇನ್ನು ಮುಂದೆ ಅಭಿವೃದ್ಧಿಪಡಿಸುವ ಎಲ್ಲಾ ಕೈಗಾರಿಕಾ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿದ ಉದ್ದಿಮೆದಾರರಿಗೆ ಜಮೀನು ಹಂಚಿಕೆ ಮಾಡಲು ಶೇ.22.65ರಷ್ಟು ಜಮೀನನ್ನು ಕಡ್ಡಾಯವಾಗಿ ಮೀಸಲಿಡಬೇಕು ಹಾಗೂ ಈ ನಿವೇಶನಗಳನ್ನು ಇತರೆ ವರ್ಗದವರಿಗೆ ಹಂಚಿಕೆ ಮಾಡಬಾರದು, ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ವರ್ಗದವರಿಗೆ ರಿಯಾಯಿತಿ ದರದಲ್ಲಿ ನಿವೇಶನ ಹಂಚಿಕೆ ಮಾಡಲು ಆದೇಶಿಸಲಾಗಿರುತ್ತದೆ.<br><br>ಅದರನ್ವಯ ಮಂಡಳಿಯು ಅಭಿವೃದ್ಧಿಪಡಿಸುತ್ತಿರುವ ಹೊಸ ಕೈಗಾರಿಕಾ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಶೇ.22.65ರಷ್ಟು ಜಮೀನು ಮೀಸಲಿರಿಸಿ ಹಂಚಿಕೆ ಮಾಡಲಾಗಿರುತ್ತದೆ. ಆದರೆ, ಕೆಲವು ಕಾರಣಗಳಿಂದ ಕೆಲವೊಂದು ಪ್ರದೇಶಗಳಲ್ಲಿ ಮೀಸಲಾತಿಗೆ ಕೊರತೆಯುಂಟಾಗಿರುವುದರಿಂದ ಬೇರೆ ಕೈಗಾರಿಕಾ ಪ್ರದೇಶಗಳಲ್ಲಿ ಹೆಚ್ಚುವರಿ ಜಮೀನನ್ನು ಮೀಸಲಿರಿಸಿ ಕೊರತೆ ಸರಿದೂಗಿಸಲಾಗುತ್ತಿದೆ. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಮೀಸಲಾತಿಯನ್ವಯ |

| | | |
|---|---|---|
| | | ಅಷ್ಟೇ ಪ್ರಮಾಣದ ಜಮೀನನ್ನು ಹಂಚಿಕೆ ಮಾಡುತ್ತಿದ್ದು ಮತ್ತು ಕೊರತೆಯುಂಟಾದ ಜಮೀನನ್ನು ಸರಿದೂಗಿಸಲಾಗುತ್ತಿರುವುದರಿಂದ ಸದರಿ ಸರ್ಕಾರಿ ಆದೇಶದ ಉಲ್ಲಂಘನೆಯಾಗಿರುವುದಿಲ್ಲ. |
| ಆ) | ಉಲ್ಲಂಘನೆ ಆಗಿದ್ದಲ್ಲಿ, ಅಂತಹ ಅಧಿಕಾರಿ/ನೌಕರರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ? (ವಿವರ ಒದಗಿಸುವುದು) | ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಉದ್ದಿಮೆದಾರರಿಗೆ ಮಂಡಳಿಯಲ್ಲಿ ದಿನಾಂಕ: 21-03-2009 ರಿಂದ ಅನ್ವಯವಾಗುವಂತೆ ಅಭಿವೃದ್ಧಿಪಡಿಸುತ್ತಿರುವ ಹೊಸ ಕೈಗಾರಿಕಾ ಪ್ರದೇಶಗಳಲ್ಲಿ ಈವರೆಗೆ ಬಹುತೇಕ ಕೈಗಾರಿಕಾ ಪ್ರದೇಶಗಳಲ್ಲಿ ಶೇ.22.65 ರಷ್ಟು ಹಂಚಿಕೆ ಪ್ರದೇಶದ ಜಮೀನನ್ನು ಕಾಯ್ದಿರಿಸಿ ಹಂಚಿಕೆ ಮಾಡಲಾಗಿದೆ. ಕೆಲವು ಕೈಗಾರಿಕಾ ಪ್ರದೇಶಗಳಲ್ಲಿ ಬೃಹತ್ ಬಂಡವಾಳ ಹೂಡುವ ಪ್ರಮುಖ ಯೋಜನೆಗಳಿಗೆ ಜಮೀನು ಹಂಚಿಕೆ ಮಾಡಿದ್ದರಿಂದ, ಮೀಸಲಾತಿಯಲ್ಲಿನ ಶೇಕಡವಾರು ಪ್ರಮಾಣ ಕಡಿಮೆಯಾದ ಕಾರಣ ಅಂತಹ ಪ್ರಕರಣಗಳಲ್ಲಿ, ಪಕ್ಕದ ಹೊಸ ಕೈಗಾರಿಕಾ ಪ್ರದೇಶಗಳಲ್ಲಿ ಶೇಕಡವಾರು ಕೊರತೆಯನ್ನು ಸರಿದೂಗಿಸಲಾಗುತ್ತಿದೆ.<br><br>ಅಲ್ಲದೇ, ಇನ್ನೂ ಕೆಲವು ಕೈಗಾರಿಕಾ ಪ್ರದೇಶಗಳಲ್ಲಿ ಮೀಸಲಿಟ್ಟ ಜಮೀನಿನಲ್ಲಿ ತಕರಾರು, ಭೂಸ್ವಾಧೀನಕ್ಕೆ ಸಂಬಂಧಿಸಿದಂತೆ ಸಮಸ್ಯೆಗಳು ಇದ್ದ ಕಾರಣದಿಂದ ಶೇಕಡವಾರು ಪ್ರಮಾಣ ಕಡಿಮೆಯಾದ ಕಾರಣ ಹೊಸ ಕೈಗಾರಿಕಾ ಪ್ರದೇಶಗಳಲ್ಲಿ ಶೇಕಡವಾರು ಕೊರತೆಯನ್ನು ಸರಿದೂಗಿಸಲಾಗುತ್ತಿದೆ. |

**ಸಂಖ್ಯೆ: ಸಿಐ 272 ಐಎಪಿ 2024**

**(ಎಂ.ಬಿ. ಪಾಟೀಲ)**
**ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು**